# ಶ್ರೀ ಜೆ.ಪಿ. ನಾರಾಯಣಸ್ವಾಮಿ ಪ್ರತಿಷ್ಠಾನ (ರಿ.),ಬೆಂಗಳೂರು

## 2024-2025 ಸಾಲಿನ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಮತ್ತು ಸಂಚಾಲಕರಿಗೆ ಸಾಮಾನ್ಯ ಸೂಚನೆಗಳು

1. 2024-2025 ನೇ ಸಾಲಿನಲ್ಲಿ ಯಾವುದೇ ಪದವಿ, ಸ್ನಾತಕೋತ್ತರ ಪದವಿ ಮತ್ತು B.ED ಓದುತ್ತಿರುವ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ನೀಡಲಾಗುತ್ತದೆ.

2. ಹಿಂದಿನ ವರ್ಷದ (2023-24) ವ್ಯಾಸಂಗದಲ್ಲಿ 65% ಕ್ಕಿಂತ ಹೆಚ್ಚಿನ ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳನ್ನು ವಿದ್ಯಾರ್ಥಿ ವೇತನಕ್ಕಾಗಿ ಪರಿಗಣಿಸಲಾಗುತ್ತದೆ, ಶಿವಮೊಗ್ಗ, ಉತ್ತರ-ಕನ್ನಡ, ದಕ್ಷಿಣ-ಕನ್ನಡ ಮತ್ತು ಉಡುಪಿ ಜಿಲ್ಲೆಯ ವಿದ್ಯಾರ್ಥಿಗಳು 75% ಕ್ಕಿಂತ ಹೆಚ್ಚಿನ ಅಂಕ ಹೊಂದಿರಬೇಕು.

3. ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿದ್ದು ಅವರ ಕುಟುಂಬವು ಬಿ.ಪಿ.ಎಲ್. ಕಾರ್ಡ್ ಅನ್ನು ಹೊಂದಿರಬೇಕು. ವಿದ್ಯಾರ್ಥಿಗಳು ತಮ್ಮ ಆಧಾರ್ ಕಾರ್ಡ್‌ನಲ್ಲಿರುವ ವಿಳಾಸದ ಜಿಲ್ಲೆಯಿಂದ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

4. ಸರ್ಕಾರದಿಂದ ಮಾನ್ಯತೆ ಪಡೆದ ಕಾಲೇಜುಗಳಲ್ಲಿ ನಿಯಮಿತವಾಗಿ ಓದುತ್ತಿರುವ ಮತ್ತು ವಿಶ್ವವಿದ್ಯಾನಿಲಯಗಳಿಗೆ ಸಂಯೋಜಿತವಾಗಿರುವ ವಿದ್ಯಾರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರು.

5. ಆರ್ಥಿಕವಾಗಿ ದುರ್ಬಲ ವರ್ಗದ ವಿದ್ಯಾರ್ಥಿಗಳಿಗೆ ಮಾತ್ರ ವಿದ್ಯಾರ್ಥಿವೇತನವನ್ನು ನೀಡಲಾಗುತ್ತದೆ.

6. ತಾಲ್ಲೂಕು ಮತ್ತು ಜಿಲ್ಲಾ ಸಂಚಾಲಕ ಸಮಿತಿಯ ವಿವರಗಳನ್ನು jpnp.org.in ನೀಡಲಾಗಿದೆ. ಅದರಲ್ಲಿ ಇರುವ ತಾಲ್ಲೂಕು/ ಜಿಲ್ಲಾ ಮುಖ್ಯ ಸಂಚಾಲಕರ ದೂರವಾಣಿ ಸಂಖ್ಯೆಗೆ ಕರೆ ಮಾಡಿ ಸಂಬಂಧಪಟ್ಟ ಸಮಿತಿಗೆ ಅರ್ಜಿಯನ್ನು ಸಲ್ಲಿಸಬೇಕು.

7. ವೆಬ್ ಸೈಟ್ (jpnp.org.in) ಮೂಲಕ ಆನ್ ಲೈನ್ ಅರ್ಜಿ ಭರ್ತಿ ಮಾಡಲು ಕೊನೆಯ ದಿನಾಂಕ 10.11.2024. ಆನ್ ಲೈನ್ ಅರ್ಜಿ ಸಲ್ಲಿಸಿದ ನಂತರ ನಿಮ್ಮ ಇ-ಮೈಲ್ ಐ.ಡಿ ಗೆ ಬರುವ ಸ್ವೀಕೃತಿ ಪತ್ರ (acknowledgement letter) ದೊಂದಿಗೆ ಅರ್ಜಿಗಳಲ್ಲಿ ಕೇಳಿರುವ ಎಲ್ಲಾ ದಾಖಲೆಗಳ ಜೆರಾಕ್ಸ್ ಪ್ರತಿಗಳೊಂದಿಗೆ ನಿಮ್ಮ ತಾಲ್ಲೂಕಿಗೆ ಸಂಭಂದಪಟ್ಟ ತಾಲ್ಲೂಕು ಸಮಿತಿಗೆ ದಿನಾಂಕ 18.11.2024 ಒಳಗೆ ಸಲ್ಲಿಸಬೇಕು.

8. ತಾಲ್ಲೂಕು ಸಮಿತಿಯು ಸ್ವೀಕರಿಸಿದ ಅರ್ಜಿಗಳು ಮತ್ತು ಮೂಲ ದಾಖಲೆಗಳನ್ನು ಪರಿಶೀಲಿಸಲು ಅಗತ್ಯವಿದ್ದಲ್ಲಿ ವಿದ್ಯಾರ್ಥಿಗಳ ಮನೆಗೆ ಖುದ್ದಾಗಿ ಭೇಟಿ ನೀಡಿ ಅವರ ಸ್ಥಿತಿಗತಿಯನ್ನು ಪರಿಶೀಲಿಸಿ, ಆರ್ಥಿಕವಾಗಿ ದುರ್ಬಲವಾಗಿದ್ದಲ್ಲಿ ಮಾತ್ರ ತಾಲ್ಲೂಕು ಮುಖ್ಯ ಸಂಚಾಲಕರ ಸಹಿ ಮತ್ತು ಮೊಹರುವಿನೊಂದಿಗೆ ದೃಢೀಕರಿಸಿ ಮುಂದಿನ ಅಗತ್ಯ ಕ್ರಮಕ್ಕಾಗಿ ಜಿಲ್ಲಾ ಸಂಚಾಲಕರ ಸಮಿತಿಗೆ ದಿನಾಂಕ 25.11.2024 ರ ಒಳಗೆ ತಲುಪಿಸಬೇಕು.

9. ಜಿಲ್ಲಾ ಸಂಚಾಲಕ ಸಮಿತಿಯು ಎಲ್ಲಾ ತಾಲ್ಲೂಕುಗಳಿಂದ ಸ್ವೀಕರಿಸಿದಂತಹ ಅರ್ಜಿಗಳನ್ನು ಮತ್ತೊಮ್ಮೆ ಸಂಪೂರ್ಣವಾಗಿ ಪರಿಶೀಲಿಸಿದ ನಂತರ ಜಿಲ್ಲಾ ಮುಖ್ಯ ಸಂಚಾಲಕರ ಸಹಿ ಮತ್ತು ಮೊಹರುವಿನೊಂದಿಗೆ ಜೆ.ಪಿ.ಎನ್.ಪಿ ಬೆಂಗಳೂರು, ಕೇಂದ್ರ ಕಛೇರಿಗೆ ದಿನಾಂಕ 02.12.2024 ಒಳಗೆ ತಲುಪಿಸಬೇಕು. ನಂತರ ಬಂದ ಅರ್ಜಿಗಳನ್ನು ಪರಿಗಣಿಸುವುದಿಲ್ಲ.

10. ವಿದ್ಯಾರ್ಥಿಗಳು ಆನ್ ಲೈನ್ ಅರ್ಜಿಯಲ್ಲಿ ಭರ್ತಿಮಾಡಿದಂತಹ ವಿವರ ಮತ್ತು ಮೂಲದಾಖಲಾತಿಯೊಂದಿಗೆ ನೀಡಿದಂತಹ ವಿವರದಲ್ಲಿ ವ್ಯತ್ಯಾಸವಿದ್ದಲ್ಲಿ ಅಂತಹ ಅರ್ಜಿಯನ್ನು ಪರಿಗಣಿಸುವುದಿಲ್ಲ.

11. ವಿದ್ಯಾರ್ಥಿಗಳಿಗೆ cheque ಮೂಲಕ ವಿದ್ಯಾರ್ಥಿ ವೇತನವನ್ನು ನೀಡಲಾಗುವುದು. ಆದ್ದರಿಂದ ವಿದ್ಯಾರ್ಥಿಗಳು ಅರ್ಜಿಯನ್ನು ಸಲ್ಲಿಸುವಾಗ ಸದರಿ ಅರ್ಜಿಯಲ್ಲಿ ತಮ್ಮ ಹೆಸರನ್ನು ತಮ್ಮ ಬ್ಯಾಂಕ್ ಖಾತೆಯಲ್ಲಿರುವ ಹೆಸರಿನಂತೆ ನಮೂದಿಸಬೇಕು.

12. ವಿದ್ಯಾರ್ಥಿವೇತನದ ಅರ್ಜಿಗಳನ್ನು ಟ್ರಸ್ಟಿಗಳೇ ಪರಿಶೀಲಿಸುತ್ತಾರೆ. ಅರ್ಜಿದಾರರಿಗೆ ಯಾವುದೇ ವಿವರಣೆಯನ್ನು ನೀಡದೆಯೇ ಅರ್ಜಿಯನ್ನು ಸ್ವೀಕರಿಸುವ / ತಿರಸ್ಕರಿಸುವ ಅಧಿಕಾರವನ್ನು ಟ್ರಸ್ಟಿನ ಕಾರ್ಯಕಾರಿ ಮಂಡಳಿಯು ಹೊಂದಿರುತ್ತದೆ, ಇತರೆ ಸಂಸ್ಥೆಗಳಿಂದ ವಿದ್ಯಾರ್ಥಿವೇತನವನ್ನು ಪಡೆದಿದ್ದರೆ ಅಂತಹ ವಿದ್ಯಾರ್ಥಿಗಳ ಹೆಸರುಗಳನ್ನು ಪರಿಗಣಿಸುವುದಿಲ್ಲ.

13. ವಿದ್ಯಾರ್ಥಿವೇತನಕ್ಕೆ ಆಯ್ಕೆಯಾದ ಅರ್ಹ ವಿದ್ಯಾರ್ಥಿಗಳ ಪಟ್ಟಿಯನ್ನು ಜನವರಿ ತಿಂಗಳ ಕೊನೆಯ ವಾರದಲ್ಲಿ ನಮ್ಮ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗುವುದು.

## ಅರ್ಜಿಯ ಜೊತೆಗೆ ಲಗತ್ತಿಸಬೇಕಾದ ದಾಖಲೆಗಳು

- ವಿಳಾಸದ ಪುರಾವೆ, ವಿದ್ಯಾಸಂಸ್ಥೆಯು ನೀಡಿದ ಗುರುತಿನ ಚೀಟಿ, ವಿದ್ಯಾರ್ಥಿಯ ಬ್ಯಾಂಕ್ ವಿವರ.
- ಆಧಾರ್ ಕಾರ್ಡ್.
- ಕುಟುಂಬದ ಬಿ.ಪಿ.ಎಲ್. ಕಾರ್ಡ್.
- ಪ್ರಸ್ತುತ ಶೈಕ್ಷಣಿಕ ವರ್ಷದ ಶುಲ್ಕ ಪಾವತಿಸಿದ ರಸೀದಿ.
- ಪ್ರಾಂಶುಪಾಲದ ಸಹಿ ಮತ್ತು ಮೊಹರುವಿನೊಂದಿಗೆ ದೃಢೀಕರಿಸಿದ ಹಿಂದಿನ ಮೂರು ವರ್ಷಗಳ ಮಾರ್ಕ್ಸ್ ಕಾರ್ಡ್.